ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ನೇವಿ-1/ಅಉನೇ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:16.03.2024.

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಕಾರ್ಯಭಾರ ಕಾರ್ಯನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ 01 ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಿರುವ (ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸಿಕೊಳ್ಳುವ ಷರತ್ತಿಗೊಳಪಟ್ಟು) ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024(ಇ) ದಿನಾಂಕ:14-03-2024 ನ್ನು ಈ ಪತ್ರದೊಂದಿಗೆ ಲಗತ್ತಿಸಿ, ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

**ಮುಖ್ಯ ಆಡಳಿತಾಧಿಕಾರಿ**
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ;**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಲೆಕ್ಕಾಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
5. ಮ್ಯಾನೇಜರ್/ಅಧೀಕ್ಷಕರು, ಆಯವ್ಯಯ ವಿಭಾಗ, ಹಣ & ಪಾವತಿ ವಿಭಾಗ, ಕಾಶಿಆ ಕಛೇರಿ, ಬೆಂಗಳೂರು.
6. ಕಛೇರಿ ಪ್ರತಿ

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ ಒಂದು ದಿನ ರಜೆ ನೀಡುವ ಬಗ್ಗೆ.

ಓದಲಾಗಿದೆ:
1. ಇದೇ ಸಮಸಂಖ್ಯೆಯ ಸರ್ಕಾರದ ಆದೇಶ ದಿನಾಂಕ: 04-03-2024.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕಕಡತ ಸಂಖ್ಯೆ:DCE/APT1/GFD/3/2024 (ಗಣಕ ಸಂಖ್ಯೆ:1293990).

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ದಿನಾಂಕ:01.01.2024 ರಿಂದ ಜಾರಿಗೆ ಬರುವಂತೆ ಗೌರವಧನ, ಇಡಿಗಂಟು ಹಾಗೂ ಆರೋಗ್ಯ ವಿಮೆ ಸೌಲಭ್ಯಗಳನ್ನು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಏಕಕಡತದಲ್ಲಿ ದಿನಾಂಕ:22.12.2023 ರಂದು ಮಾನ್ಯ ಉನ್ನತ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳಿಗೆ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು (ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸುವ ಷರತ್ತಿಗೊಳಪಟ್ಟು) ಮಂಜೂರು ಮಾಡಲು ನಿರ್ಣಯಿಸಲಾಗಿರುತ್ತದೆ.

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಪೂರ್ಣ ಕಾರ್ಯಭಾರವನ್ನು ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರತಿ ತಿಂಗಳಿಗೆ ಒಂದು ದಿನ ಸಾಂದರ್ಭಿಕ ರಜೆ ಮಂಜೂರು ಮಾಡುವಂತೆ ಕೋರಿ ಏಕ ಕಡತದಲ್ಲಿ ಸರ್ಕಾರಕ್ಕೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024 (ಇ)**

**ಬೆಂಗಳೂರು, ದಿನಾಂಕ: 14 -03-2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಿ ಆದೇಶಿಸಿದೆ. ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಂ. ಧನಂಜಯ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ), (ಎ ಮತ್ತು ಎಸ್.ಎಸ್.ಎ) ಮತ್ತು (ಇ ಮತ್ತು ಆರ್.ಎಸ್.ಎ), ಬೆಂಗಳೂರು.

2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಮುಖ್ಯ ಆಡಳಿತಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4. ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ / ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ (ಆಯುಕ್ತಾಲಯದ ಮುಖಾಂತರ)
5. ಇ-ಆಡಳಿತ, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)//ಶಾಖಾ ರಕ್ಷಾ ಕಡತ.

<u>ಪ್ರತಿ ಮಾಹಿತಿಗಾಗಿ:</u>

ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು